# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 60(884) |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಶಶೀಲ್ .ಜಿ.ನಮೋಶಿ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 12-12-2024 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಇದೇ ನವೆಂಬರ್ 17 ರಂದು ಕಲ್ಯಾಣ ಕರ್ನಾಟಕ ಭಾಗದ 97 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ನೇಮಕಾತಿಗಾಗಿ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜೊಂದರಲ್ಲಿ ನಡೆದ ಪರೀಕ್ಷೆಯ ವೇಳೆ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲು ಸುಮಾರು ಅರ್ಧ ಗಂಟೆ ತಡವಾಗಿದ್ದನ್ನು ಅಭ್ಯರ್ಥಿಗಳು ತಮಗಾದ ಅನ್ಯಾಯದ ವಿರುದ್ಧ ಪ್ರಶ್ನಿಸಿ ಪ್ರತಿಭಟಿಸಿದ್ದಕ್ಕಾಗಿ ಅಧಿಕಾರಿಗಳು ತಮ್ಮ ತಪ್ಪನ್ನು ಮರೆಮಾಚಲು 12 ಜನ ಅಮಾಯಕ ಅಭ್ಯರ್ಥಿಗಳ ಮೇಲೆ ಪೊಲೀಸ್ ಪ್ರಕರಣವನ್ನು ದಾಖಲಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಘಟನೆಗೆ ಕಾರಣರಾದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು; | ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:15-03-2024 ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಗ್ರೂಪ್-ಸಿ ಹೈದ್ರಾಬಾದ್-ಕರ್ನಾಟಕ ವೃಂದದ 97 ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ದಿನಾಂಕ :17-11-2024 ರಂದು ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಸರ್ಕಾರಿ ಪದವಿ ಮಹಾವಿದ್ಯಾಲಯ (ಉಪ ಕೇಂದ್ರ ಸಂಖ್ಯೆ 50)ರಲ್ಲಿ ಒಟ್ಟು 840 ಅಭ್ಯರ್ಥಿಗಳನ್ನು ಹಂಚಿಕೆ ಮಾಡಿ, 35 ಕೊಠಡಿಗಳಲ್ಲಿ ಪರೀಕ್ಷೆಯನ್ನು ನಡೆಸಲಾಗಿರುತ್ತದೆ.<br><br>ಪರೀಕ್ಷಾ ಕೇಂದ್ರದ ಎಲ್ಲಾ ಸಿ.ಸಿ.ಟಿ.ವಿ ಕ್ಯಾಮಾರಗಳ ಫೂಟೇಜ್‌ಗಳನ್ನು ಪರೀಕ್ಷಿಸಿ ಯಾವುದೇ ಪ್ರಶ್ನೆಪತ್ರಿಕೆಯು ಸೋರಿಕೆ ಆಗಿರುವುದು ಕಂಡುಬಂದಿರುವುದಿಲ್ಲವೆಂದು ಹಾಗೂ ಪ್ರಶ್ನೆಪತ್ರಿಕೆಗಳ ಸೀಲ್ಡ್ ಟ್ರಂಕ್‌ಗಳನ್ನು ಸಿ.ಸಿ.ಟಿ.ವಿ ಕ್ಯಾಮರಾ ಕಣ್ಗಾವಲಿನಲ್ಲಿ ಇರಿಸಲಾಗಿರುತ್ತದೆ. ಬೆಳಿಗ್ಗೆ 9-26 ಗಂಟೆಗೆ ಅವುಗಳನ್ನು ವಿಡಿಯೋ ಚಿತ್ರಿಕರಿಸುತ್ತಾ, ಎಲ್ಲರ ಸಮ್ಮುಖದಲ್ಲಿ ತೆರೆಯಲಾಗಿರುತ್ತದೆ ಹಾಗೂ ಕೊಠಡಿ ಸಂಖ್ಯೆ:05ಕ್ಕೆ ಹೊಂದಾಣಿಕೆ ಮಾಡುವ ಸಮಯದಲ್ಲಿ ಅದಕ್ಕೆ ಸಂಬಂಧಿಸಿದ ನಮೂನೆ-ಬಿ ಫಾರಂಗಳಿಗೆ ಪರೀಕ್ಷಾ ಅಭ್ಯರ್ಥಿಗಳ ಸಹಿ ಮಾಡಿಸಿ ಅವರ ಸಮ್ಮುಖದಲ್ಲಿ ತೆರೆದು ಹಂಚುವಾಗ ಕೊಠಡಿ ಸಂಖ್ಯೆ:05ರ ಕೆಲವು ಅಭ್ಯರ್ಥಿಗಳು ಪ್ರಶ್ನೆಪತ್ರಿಕೆ ಲೀಕ್ ಮಾಡಿರುವುದಾಗಿ ತಪ್ಪು ಭಾವಿಸಿ ಅನಗತ್ಯ ಗೊಂದಲ ಸೃಷ್ಟಿಸಿರುತ್ತಾರೆಂದು ಆಯೋಗವು ತಿಳಿಸಿರುತ್ತದೆ.<br><br>ಈ ಘಟನೆಗೆ ಸಂಬಂಧಿಸಿದಂತೆ, ಸಿಂಧನೂರು ನಗರ ಪೊಲೀಸ್ ಠಾಣೆಯಲ್ಲಿ 12 ಅಭ್ಯರ್ಥಿಗಳು ಹಾಗೂ ಇತರರ ವಿರುದ್ಧ ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಎಫ್.ಐ.ಆರ್. ದಾಖಲಿಸಿರುತ್ತಾರೆ.<br><br>ಈ ಘಟನೆ ಕುರಿತು ಸಮಗ್ರ ತನಿಖೆ ನಡೆಸಲು |
| ಆ | ಈ ಘಟನೆಗೆ ಸಂಬಂಧಿಸಿದಂತೆ ಕೂಲಂಕುಷವಾಗಿ ತನಿಖೆಯನ್ನು ನಡೆಸಲು ಸರ್ಕಾರವು ಆದೇಶಿಸಿದೆಯೆ ; ಆದೇಶಿಸಿದ್ದಲ್ಲಿ ತನಿಖಾ ವರದಿಯ ಕುರಿತು ಸಂಪೂರ್ಣ ವಿವರ ನೀಡುವುದು | |

| | | |
|---|---|---|
| | | ಕರ್ನಾಟಕ ಲೋಕಸೇವಾ ಆಯೋಗವು 03 ಸದಸ್ಯರ ಉಪ ಸಮಿತಿಯನ್ನು ರಚಿಸಿದ್ದು, ಉಪ ಸಮಿತಿಯು ನೀಡುವ ವರದಿಯಂತೆ ಕ್ರಮಕೈಗೊಳ್ಳಲು ನಿರ್ಣಯಿಸಿರುತ್ತದೆ. |
| ಇ | ಈ ಪರೀಕ್ಷೆಯ ವೇಳೆ ಅಧಿಕಾರಿಗಳು ತಪ್ಪು ಮಾಡದಿದ್ದರೆ ಅಭ್ಯರ್ಥಿಗಳು ಪ್ರತಿಭಟಿಸುವ ಪ್ರಶ್ನೆಯೇ ಉದ್ಭವಿಸುತ್ತಿರಲಿಲ್ಲ; ಆದರೆ ಅಧಿಕಾರಿಗಳು ಮಾಡಿದ ತಪ್ಪಿಗೆ ಇಷ್ಟೆಲ್ಲಾ ಅವಾಂತರವಾಗಿರುವುದರಿಂದ ಇದು ಲೋಪವೆಸಗಿದ ಅಧಿಕಾರಿಗಳನ್ನು ರಕ್ಷಿಸುವ ಹುನ್ನಾರವಲ್ಲವೇ; ಈ ಕುರಿತು ಸ್ಪಷ್ಟನೆಯನ್ನು ನೀಡುವುದು; | ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಸೂಚನೆಗಳನ್ನು ನೀಡಲಾಗಿರುತ್ತದೆ. ಅದರನ್ವಯ ಅಭ್ಯರ್ಥಿಯು ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವರು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಾಗಿ ತಿಳಿಸಲಾಗಿದೆ. ಅದರಂತೆ ಈ ಪ್ರಕರಣದಲ್ಲಿ ಪರೀಕ್ಷಾ ಕೊಠಡಿಯಲ್ಲಿ ಶಾಂತಿಗೆ ಭಂಗ ತಂದಂತಹ ಅಭ್ಯರ್ಥಿಗಳ ಮೇಲೆ ಎಫ್‌ಐಆರ್‌ನ್ನು ದಾಖಲಿಸಲಾಗಿದೆ.<br><br>ಈ ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಈಗಾಗಲೇ ಆಯೋಗದಲ್ಲಿ ಉಪ ಸಮಿತಿಯನ್ನು ರಚಿಸಲಾಗಿದ್ದು, ವರದಿ ಸ್ವೀಕೃತವಾದ ನಂತರ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು. |
| ಈ | ಅಲ್ಲದೆ ಈ ಘಟನೆಯ ವೇಳೆ ಕರ್ತವ್ಯ ನಿರ್ವಹಿಸುತ್ತಿದ್ದ ತಹಶಿಲ್ದಾರ್‌ವೊಬ್ಬರು ಅಮಾಯಕ ಆರೋಪ ಅಭ್ಯರ್ಥಿಯೊಬ್ಬರಿಗೆ ಈ ಬಗ್ಗೆ ಎಲ್ಲಿಯೂ ಬಾಯಿ ಬಿಡದಂತೆ ಬೆದರಿಕೆಯೊಡ್ಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಅಧಿಕಾರಿಯ ಮೇಲೆ ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು; | ಬಂದಿಲ್ಲ. |
| ಉ | ಈ ಅಭ್ಯರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಪ್ರಕರಣವನ್ನು ಹಿಂತೆಗೆದುಕೊಂಡು ಅವರಿಗೆ ನ್ಯಾಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳಬಹುದಲ್ಲವೇ ವಿವರ ನೀಡುವುದು? | ಈಗಾಗಲೇ ರಚಿಸಲಾಗಿರುವ ಆಯೋಗದ ಉಪ ಸಮಿತಿಯು ಸಲ್ಲಿಸುವ ಅಂತಿಮ ವರದಿಯನ್ನು ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ.ಸಿಆಸುಇ 236 ಎಸ್‌ಎಲ್‌ಎ 2024**

**( ಸಿದ್ದರಾಮಯ್ಯ)**
ಮುಖ್ಯಮಂತ್ರಿ